# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 341

ಸದಸ್ಯರ ಹೆಸರು : ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 11.12.2024

ಉತ್ತರಿಸುವ ಸಚಿವರು : ಕಂದಾಯ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಹೆಮ್ಮಿಗೆಪುರ ಗ್ರಾಮದ ಸ.ನಂ. 43 ರಲ್ಲಿ 1 ಎಕರೆ 06 ಗುಂಟೆ ಸರ್ಕಾರಿ ಗುಂಡು ತೋಪು ಜಮೀನನ್ನು ಸ್ಮಶಾನಕ್ಕಾಗಿ ಕಾಯ್ದಿರಿಸಿ ಸರ್ಕಾರ ಆದೇಶ ಹೊರಡಿಸಿ ಸುಮಾರು ಒಂದು ವರ್ಷ ಕಳೆದರೂ ಕೂಡ ಸಾರ್ವಜನಿಕ ಉದ್ದೇಶಕ್ಕಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು) | ಬಂದಿದೆ.<br><br>ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಹೆಮ್ಮಿಗೆಪುರ ಗ್ರಾಮದ ಸ.ನಂ 43 ರಲ್ಲಿ 1-06 ಎಕರೆ/ಗುಂಟೆ ಸರ್ಕಾರಿ ಗುಂಡುತೋಪು ಜಮೀನನ್ನು ಸಾರ್ವಜನಿಕ ಸ್ಮಶಾನದ ಉದ್ದೇಶಕ್ಕಾಗಿ ಕಾಯ್ದಿರಿಸಿ ಆದೇಶಿಸಲಾಗಿರುತ್ತದೆ. ಪ್ರಶ್ನಿತ ಜಮೀನಿಗೆ ಸಂಬಂಧಿಸಿದಂತೆ ಶ್ರೀ ಡಿ.ಟಿ.ಸಂತೋಷ್ ಬಿನ್ ಡಿ.ಸಿ.ತಮ್ಮಣ್ಣ ರವರು ಕರ್ನಾಟಕ ಮೇಲ್ಮನವಿ ಪ್ರಾಧಿಕಾರದಲ್ಲಿ Revenue Appeal No.287/2023 ರಂತೆ ಪ್ರಕರಣ ದಾಖಲಿಸಿದ್ದು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರವು ದಿನಾಂಕ:18-10-2023 ರಂದು ಯಥಾ ಸ್ಥಿತಿ ಕಾಪಾಡಲು ಆದೇಶಿಸಿರುವುದರಿಂದ ಬೆಂಗಳೂರು ಮಹಾನಗರ ಪಾಲಿಕೆಗೆ ಸದರಿ ಜಮೀನನ್ನು ಹಸ್ತಾಂತರಿಸಿರುವುದಿಲ್ಲ. ಅಲ್ಲದೇ ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 19594/2023 ಮತ್ತು WP No.4756/2023ರಂತೆ ಪ್ರಕರಣಗಳು ದಾಖಲಾಗಿದ್ದು ವಿಚಾರಣೆ ಹಂತದಲ್ಲಿರುತ್ತವೆ. |
| ಆ) | ಸದರಿ ಜಮೀನನ್ನು ಯಾವ ಕಾರಣದಿಂದ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರ ಮಾಡಿರುವುದಿಲ್ಲ. ಇಲ್ಲಿ ಸುಮಾರು 2000 ಸಾವಿರ ಜನಸಂಖ್ಯೆ ಇರುವ ಹೆಮ್ಮಿಗೆಪುರ ಹಾಗೂ ಸುತ್ತ ಮುತ್ತಲಿನ ಗ್ರಾಮಸ್ಥರಿಗೆ ಸ್ಮಶಾನವಿಲ್ಲದೇ ತೊಂದರೆಯಾಗಿದ್ದು, ಯಾವ ಕಾಲಮಿತಿಯೊಳಗೆ ಜಮೀನನ್ನು ಸಂಬಂಧಪಟ್ಟವರಿಗೆ ಹಸ್ತಾಂತರಿಸಲಾಗುವುದು (ವಿವರ ನೀಡುವುದು) | ಕರ್ನಾಟಕ ಮೇಲ್ಮನವಿ ಪ್ರಾಧಿಕಾರ ಹಾಗೂ ಮಾನ್ಯ ಉಚ್ಛ ನ್ಯಾಯಾಲಯದ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ಹೊರಡಿಸುವ ಅಂತಿಮ ಆದೇಶಕ್ಕೆ ಒಳಪಟ್ಟು ಜಮೀನನ್ನು ಹಸ್ತಾಂತರಿಸಲು ಕ್ರಮ ಕೈಗೊಳ್ಳಲಾಗುವುದು. |
| ಇ) | ಸದರಿ ಜಮೀನನ್ನು ಸಾರ್ವಜನಿಕ ಉಪಯೋಗಕ್ಕಾಗಿ ಹಸ್ತಾಂತರಿಸಲು ಇರುವ ಅಡೆತಡೆಗಳೇನು? (ವಿವರ ನೀಡುವುದು) | |

ಸಂಖ್ಯೆ: ಆರ್‌ಡಿ 109 ಎಲ್‌ಜಿಕ್ಯೂ 2024

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು